# ಪದ್ಯ ಪೂರಕ

## 2. ಸಾರ್ಥಕ – – ದಿನಕರ ದೇಸಾಯಿ

**ಅ. ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರಿಸಿ.**

**1. ಗಾಳಿಯಲ್ಲಿ ಬೂದಿಯನ್ನು ತೂರಿದಾಗ ಎಲ್ಲಿ ಬೀಳುತ್ತದೆ?**

**ಉತ್ತರ :** ಗಾಳಿಯಲ್ಲಿ ಬೂದಿಯನ್ನು ತೂರಿದಾಗ ಭತ್ತ ಬೆಳೆಯುವ ನಾಡಿನಲ್ಲಿ ಹೋಗಿ ಬೀಳುತ್ತದೆ.

**2. ಬೂದಿಯನ್ನು ಹೊಳೆಯಲ್ಲಿ ಹರಿಯಬಿಟ್ಟಾಗ ಯಾರಿಗೆ ಸಿಗುತ್ತದೆ?**

**ಉತ್ತರ :** ಬೂದಿಯನ್ನು ಹೊಳೆಯಲ್ಲಿ ಹರಿಯಬಿಟ್ಟಾಗ ಮೀನಿನ ಬಾಯಿಗೆ ಸಿಗುತ್ತದೆ.

**3. ದೇಹ ಏಕೆ ವ್ಯರ್ಥವಾಗಿದೆ?**

**ಉತ್ತರ :** ತನ್ನ ದೇಹ ಸ್ವಾರ್ಥವ ನೆನೆದು ವ್ಯರ್ಥವಾಗಿದೆ.

**4. ಬೂದಿಯನ್ನು ಕೊಳದಲ್ಲಿ ಬಿಡುವುದರಿಂದ ಬದುಕು ಧನ್ಯವಾಗುವುದು ಹೇಗೆ? – ವಿವರಿಸಿ.**

**ಉತ್ತರ :** ನಮ್ಮ ಹೆಣದ ಬೂದಿಯನ್ನು ನೀರಿನಲ್ಲಿ ಬಿಡುವುದರಿಂದ ಅದು ಕೆಸರಿನೊಡನೆ ಕೂಡಿ ಫಲವತ್ತಾದ ಮಣ್ಣಾಗುತ್ತದೆ. ಅದರಲ್ಲಿ ಕಮಲ ಅರಳಿದಾಗ ನಾವು ಹುಟ್ಟು ಸಾವಿನಿಂದ ಮುಕ್ತರಾಗಿ ನಮ್ಮ ಬದುಕು ಧನ್ಯವಾಗುತ್ತದೆ.

**5. ಸಾರ್ಥಕ ಪದ್ಯದ ಯಾವ ಅಂಶಗಳನ್ನು ನೀವು ಮೆಚ್ಚುವಿರಿ?**

**ಉತ್ತರ :** ಮಾನವನು ತನ್ನ ಸ್ವಾರ್ಥ ಗುಣಗಳನ್ನು ತೊರೆದು ಪರೋಪಕಾರಿಯಾದಾಗ ಬದುಕು ಸಾರ್ಥಕ ಎಂಬ ಅಂಶವನ್ನು ನಾನು ಮೆಚ್ಚುತ್ತೇನೆ.